**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ 02 ಇಪಿಎಸ್ 2023

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು
ದಿನಾಂಕ: 25.03.2024

**<u>ಸುತ್ತೋಲೆ</u>**

ವಿಷಯ: 2024 ರ ಸಾರ್ವತ್ರಿಕ ಲೋಕಸಭಾ ಚುನಾವಣೆಯ ಸಂಬಂಧ ಸರ್ಕಾರಿ ಪಾಲಿಟೆಕ್ನಿಕ್ ಕಟ್ಟಡಗಳನ್ನು ಚುನಾವಣಾ ಆಯೋಗ ಪಡೆದಿರುವ ಕುರಿತು ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: DTE-ADMI0ACM2/61/2023, ದಿನಾಂಕ: 20.10.2023.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಚುನಾವಣಾ ಆಯೋಗ, ಭಾರತ ಸರ್ಕಾರ ಇವರಿಂದ 2024 ರ ಸಾರ್ವತ್ರಿಕ ಲೋಕಸಭಾ ಚುನಾವಣೆಯ ವೇಳಾಪಟ್ಟಿಯು ಪ್ರಕಟವಾಗಿರುತ್ತದೆ. ಕರ್ನಾಟಕದಲ್ಲಿ ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದ್ದು, (ದಿನಾಂಕ: 26/04/2024 ಮತ್ತು 07/05/2024) ಫಲಿತಾಂಶವು 04/06/2024 ರಂದು ಪ್ರಕಟವಾಗಲಿದೆ.

ಮೇ-2024 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗಳನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸುಸೂತ್ರವಾಗಿ ಹಾಗೂ ಸಮರ್ಪಕವಾಗಿ ನಡೆಸಬೇಕಾಗಿರುವ ಹಿನ್ನಲೆಯಲ್ಲಿ, ಸದರಿ ಚುನಾವಣಾ ಕಾರ್ಯಕ್ಕೆ ಯಾವುದೇ ಸರ್ಕಾರಿ ಪಾಲಿಟೆಕ್ನಿಕ್‌ಗಳ ಕಟ್ಟಡಗಳನ್ನು ಮಸ್ಟರಿಂಗ್/ಡಿಮಸ್ಟರಿಂಗ್ /ಇವಿಎಂಗಳನ್ನು ಸಂಗ್ರಹಿಸಲು ಭದ್ರತಾ ಕೊಠಡಿ/ಮತ ಎಣಿಕೆಗಾಗಿ ಚುನಾವಣಾ ಆಯೋಗವು ಸ್ವಾಧೀನಕ್ಕೆ ಪಡೆದಿದ್ದಲ್ಲಿ, ಅದರ ಮಾಹಿತಿಯನ್ನು ಈ ಕೂಡಲೇ ಮಂಡಳಿಯ ಇ-ಮೇಲ್ ವಿಳಾಸ: btejdexam@gmail.com ಗೆ ಕಳುಹಿಸಿಕೊಡುವಂತೆ ತಿಳಿಸಲಾಗಿದೆ. ಸದರಿ ವಿಷಯವನ್ನು "ಪರೀಕ್ಷಾ ಜರೂರು" ಎಂದು ಪರಿಗಣಿಸಿ ಅಗತ್ಯ ತುರ್ತು ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ
ಬೆಂಗಳೂರು.

25/3/2024

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮುಂದಿನ ಕ್ರಮಕ್ಕಾಗಿ.

ಪ್ರತಿ:

1. ಮಾನ್ಯ ಆಯುಕ್ತರ ಆಪ್ತಶಾಖೆ – ಅವಗಾಹನೆಗಾಗಿ.
2. ಮಾನ್ಯ ನಿರ್ದೇಶಕರ ಆಪ್ತಶಾಖೆ – ಅವಗಾಹನೆಗಾಗಿ.
3. ಉಪ ನಿರ್ದೇಶಕರು (ಪರೀಕ್ಷೆ) – ಮಾಹಿತಿಗಾಗಿ.
4. ಇ-ಆಡಳಿತ ವಿಭಾಗ – ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
5. ಗಣಕ ಕೇಂದ್ರ, ತಾಂತ್ರಿಕ ಪರೀಕ್ಷಾ ಮಂಡಳಿ – ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು.